ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2017–18** **ದಿನಾಂಕ: 20–11–2018**

# ಪತ್ರಿಕಾ ಆಮಂತ್ರಣ

1. ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತದಿಂದ ಮೂರನೇ ಆರು ಬೋಗಿಗಳ ರೈಲಿನ ಚಾಲನೆ

   **ಹಸಿರು ನಿಶಾನೆ**

   ಹೆಚ್. ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

   ಡಾ. ಜಿ. ಪರಮೇಶ್ವರ್, ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

   ದಿನಾಂಕ: 22–11–2018, ಗುರುವಾರ, ಸಮಯ : ಬೆಳಿಗ್ಗೆ 10–30 ಗಂಟೆಗೆ

   ಸ್ಥಳ : ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರೋ ನಿಲ್ದಾಣ, ವಿಧಾನಸೌಧ, ಬೆಂಗಳೂರು.

2. ಕರ್ನಾಟಕ ವಿಧಾನಸಭೆಯ ಅರ್ಜಿಗಳ ಸಮಿತಿಯಿಂದ ಬೆಂಗಳೂರು ನಗರದ ಬೌರಿಂಗ್ ಇನ್‌ಸ್ಟಿಟ್ಯೂಟ್ ಕ್ಲಬ್, ಕಾಕ್ಸ್‌ಟಾನ್ ಬಡಾವಣೆಯಲ್ಲಿರುವ ಇಂಡಿಯನ್ ಜಮಖಾನ ಕ್ಲಬ್ ಹಾಗೂ ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಬೈರತಿ ಅಮಾನಿಖಾನೆಯಲ್ಲಿ ಬಿ.ಡಿ.ಎ. ವತಿಯಿಂದ ನಿರ್ಮಿಸಿರುವ ಅರ್ಕಾವತಿ ಬಡಾವಣೆಗೆ ಸಂಪರ್ಕ ರಸ್ತೆ ಕಲ್ಪಿಸುವ ಕುರಿತು ಸಭೆ ನಂತರ ಸ್ಥಳ ಪರಿವೀಕ್ಷಣೆ

   ಅಧ್ಯಕ್ಷತೆ:

   ಎಂ. ಕೃಷ್ಣಾರೆಡ್ಡಿ, ವಿಧಾನ ಸಭೆಯ ಉಪ ಸಭಾಧ್ಯಕ್ಷರು ಹಾಗೂ ಸಮಿತಿಯ ಅಧ್ಯಕ್ಷರು.

   ದಿನಾಂಕ: 22–11–2018, ಗುರುವಾರ, ಸಮಯ: 11–00 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 135, ವಿಧಾನಸೌಧ, ಬೆಂಗಳೂರು.

**ಸಂಖ್ಯೆ 1323/1423**

# ಪತ್ರಿಕಾ ಪ್ರಕಟಣೆ

## ಮಹಾತ್ಮ ಗಾಂಧಿ ಮಾಧ್ಯಮ ಕೇಂದ್ರವನ್ನು ಸದಾ ಚಟುವಟಿಕೆಗಳ ಕೇಂದ್ರವನ್ನಾಗಿ ರೂಪಿಸಲು ಯತ್ನಿಸುವೆ : ಹೆಚ್ ಡಿ ಕುಮಾರಸ್ವಾಮಿ

**ಬೆಂಗಳೂರು, ನವೆಂಬರ್ 20 (ಕರ್ನಾಟಕ ವಾರ್ತೆ) :**

ಸರ್ಕಾರದ ವಿವಿಧ ಇಲಾಖೆಗಳ ಸಾಧನೆಯನ್ನು ಬಿತ್ತರಿಸಲು ಅತ್ಯುತ್ತಮ ವೇದಿಕೆಯಾಗಿರುವ ಮಹಾತ್ಮ ಗಾಂಧಿ ಮಾಧ್ಯಮ ಕೇಂದ್ರವನ್ನು ಸದಾ ಚಟುವಟಿಕೆಗಳ ಕೇಂದ್ರವನ್ನಾಗಿ ರೂಪಿಸಲು ಯತ್ನಿಸುವುದಾಗಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಅವರು ಇಲ್ಲಿ ಇಂದು ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸೌಧದ ಮೂರನೇ ಮಹಡಿಯಲ್ಲಿ 3.6 ಕೋಟಿ ರೂ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಈ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಅವರು ಈ ನಿಟ್ಟಿನಲ್ಲಿ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾಪಿಸಿ ಸಹೋದ್ಯೋಗಿಗಳ ಸಹಕಾರ ಪಡೆಯುವುದಾಗಿ ತಿಳಿಸಿದ ಅವರು ತಮ್ಮ ಈ ಆಶಯಕ್ಕೆ ಪುಷ್ಠಿ ನೀಡಲು ತಾವೇ ಪ್ರಮುಖ ಸಭೆ–ಸಮಾರಂಭಗಳನ್ನು ಆಯೋಜಿಸುವುದರ ಜೊತೆಗೆ ಪತ್ರಿಕಾಗೋಷ್ಠಿಗಳನ್ನು ನಡೆಸಿ ಮಾಧ್ಯಮ ಮಿತ್ರರನ್ನು ಆಕರ್ಷಿಸಲು ಯತ್ನಿಸುವುದಾಗಿ ಪ್ರಕಟಿಸಿದರು. ಅಲ್ಲದೆ, ಈ ಸಭಾಂಗಣವನ್ನು ಪರಿಣಾಮಕಾರಿಯಾಗಿ ಬಳಕೆ ಮಾಡಿ ಸಭಾಂಗಣವನ್ನು ಸಾರ್ಥಕಪಡಿಸಲು ಪ್ರಯತ್ನಿಸುವುದಾಗಿ ಅವರು ತಿಳಿಸಿದರು.

ಪತ್ರಕರ್ತರೂ ಆಗಿದ್ದ ಮಹಾತ್ಮ ಗಾಂಧಿ ಅವರ ಹೆಸರಿನಲ್ಲಿ ಮೈದೇಳಿರುವ ಈ ಸಭಾಂಗಣವನ್ನು ಮಹಾತ್ಮಗಾಂಧಿ ಅವರ 150 ನೇ ಜನ್ಮ ವರ್ಷಾಚರಣೆಯ ಸಂದರ್ಭದಲ್ಲಿ ಉದ್ಘಾಟಿಸುವ ಸೌಭಾಗ್ಯ ತಮ್ಮದಾಗಿರುವುಕ್ಕೆ ತಾವು ಭಾಗ್ಯಶಾಲಿ ಎಂದು ಭಾವಿಸುವುದಾಗಿ ತಿಳಿಸಿದ ಕುಮಾರಸ್ವಾಮಿ ಅವರು ಈ ಮುನ್ನ 2007 ರಲ್ಲಿ ತಾವು ಮುಖ್ಯಮಂತ್ರಿಯಾಗಿದ್ದಾಗ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಚೇರಿ ವಾರ್ತಾ ಸೌಧ ಕಟ್ಟಡವನ್ನು ಲೋಕಾರ್ಪಣೆ ಮಾಡಿದುದನ್ನು ಸ್ಮರಿಸಿದರು.

ನವದೆಹಲಿಯನ್ನು ಹೊರತುಪಡಿಸಿದರೆ ಮಾಧ್ಯಮಗಳ ಅಗತ್ಯ ಪೂರೈಸುವ ಸುಸಜ್ಜಿತ ಸಭಾಂಗಣ ಬೆಂಗಳೂರಿನಲ್ಲಿಯೇ ಇದೆ ಎಂಬುದು ಅಭಿಮಾನದ ಸಂಗತಿಯಾಗಿದೆ. ಒಂದು ಎಲ್ ಇ ಡಿ ಗೋಡೆ, ಮೂರು ಎಲ್ ಸಿ ಡಿ ಪರದೆ, ವೈ-ಫೈ ಹಾಗೂ ನೇರ ಪ್ರಸಾರ ವ್ಯವಸ್ಥೆ, ಪ್ರತಿ ಆಸನದ ಮುಂದೆ ಮೈಕ್ ಒಳಗೊಂಡ 125 ಆಸನಗಳ ಸಂಪೂರ್ಣ ಹವಾನಿಯಂತ್ರಿತ ಹಾಗೂ ಮಾಧ್ಯಮ-ಸ್ನೇಹೀ ಈ ಸಭಾಂಗಣವನ್ನು ಬಳಸಲು ಪ್ರಾರಂಭಿಸಿದರೆ ಭದ್ರತೆಯ ಹೆಸರಿನಲ್ಲಿ ವಿಧಾನ ಸೌಧದಲ್ಲಿ ಅನಗತ್ಯವಾಗಿ ಮುಜುಗುರಕ್ಕೆ ಒಳಗಾಗುವ ಮಾಧ್ಯಮ ಮಿತ್ರರ ಕಷ್ಟವನ್ನು ತಪ್ಪಿಸಬಹುದಾಗಿದೆ. ಸರ್ಕಾರದ ಈ ಕ್ರಮವನ್ನು ಅನ್ಯಥಾ ಭಾವಿಸಬಾರದು ಎಂದು ಮುಖ್ಯಮಂತ್ರಿ ಮಾಧ್ಯಮ ಮಿತ್ರರಲ್ಲಿ ಮನವಿ ಮಾಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಹಾಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಇಲಾಖಾ ಪುನಾರಚನೆ ಕುರಿತು ಸರ್ಕಾರ ರಚಿಸಿದ್ದ ಎಂ ಆರ್ ಶ್ರೀನಿವಾಸ ಮೂರ್ತಿ ಅವರ ವರದಿಯನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಇಲಾಖೆಯ ಚಿತ್ರ ಭಂಡಾರದಿಂದ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಅವರಿಗೆ ಸಂಬಂಧಿಸಿದ ಅಪರೂಪದ ಛಾಯಾಚಿತ್ರಗಳ ಪೋಟೋ ಆಲ್ಬಂ ಶಾಸಕರ ದಿನಾಚರಣೆಯ ಸಂದರ್ಭದಲ್ಲಿ ಕ್ರಿಕೆಟ್ ಆಟದಲ್ಲಿ ಬ್ಯಾಟ್ ಹಿಡಿದು ಚೆಂಡನ್ನು ಹೊಡೆದ ವಿಶೇಷ ಛಾಯಾಚಿತ್ರದ ಪಟವನ್ನು ಇಲಾಖಾ ನಿರ್ದೇಶಕರು ಕೊಡುಗೆಯಾಗಿ ನೀಡಿದರು.

ಈ ಮುನ್ನ ಮಾತನಾಡಿದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್ ಆರ್ ವಿಶುಕುಮಾರ್ ಅವರು ತಮ್ಮ ಸ್ವಾಗತ ಭಾಷಣದಲ್ಲಿ ವೃತ್ತಿ ನೈಪುಣ್ಯತೆ ಹಾಗೂ ವೃತ್ತಿಪರತೆಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಎಲ್ಲರ ಮನ್ನಣೆ ಗಳಿಸಿದೆ ಎಂದರು.

ಆಡಳಿತ ವಿಭಾಗದ ಜಂಟಿ ನಿರ್ದೇಶಕ ಹೆಚ್ ಬಿ ದಿನೇಶ್ ಅವರು ಮಾತನಾಡಿ ಒಂದೆಡೆ ಮಾಧ್ಯಮಗಳ ಸಂಖ್ಯೆ ಬೆಳೆಯುತ್ತಿದೆ. ಮತ್ತೊಂದೆಡೆ ಸಿಬ್ಬಂದಿ ಕೊರತೆ ಇಲಾಖೆಯನ್ನು ಕಾಡುತ್ತಿದೆ ಎಂಬ ಅಂಶವನ್ನು ಮುಖ್ಯಮಂತ್ರಿಯವರ ಗಮನಕ್ಕೆ ತಂದರು. ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರ ಸಂದೇಶ ಸಾರುವ ಮಹತ್ತರ ಕಾರ್ಯ ನಿರ್ವಹಿಸುತ್ತಿರುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಗಾಂಧಿ ಭವನದ ನಿರ್ಮಾಣ ಕಾರ್ಯ ಚುರುಕುಗೊಳ್ಳಲಿ ಎಂದು ಆಶಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷ ಎಂ ಸಿದ್ದರಾಜು, ಮುಖ್ಯಮಂತ್ರಿಯವರ ಕಾರ್ಯದರ್ಶಿ ಎಸ್ ಸೆಲ್ವಕುಮಾರ್ ಅವರೂ ಸಮಾರಂಭದಲ್ಲಿ ಮುಖ್ಯಮಂತ್ರಿಯವರ ಜೊತೆ ವೇದಿಕೆಯನ್ನು ಹಂಚಿಕೊಂಡಿದ್ದರು.

********

ಡಿ ಪಿ ಎಂ

**ಸಂಖ್ಯೆ 1324/1424**

# ಕರ್ನಾಟಕ ವಿಧಾನ ಸಭೆಯ ಅರ್ಜಿಗಳ ಸಮಿತಿಯಿಂದ ನಗರ ವ್ಯಾಪ್ತಿಯಲ್ಲಿ ಸ್ಥಳ ಪರಿವೀಕ್ಷಣೆ

ಬೆಂಗಳೂರು, ನವೆಂಬರ್ 20, (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನಸಭೆಯ ಸಮಿತಿ ಅರ್ಜಿಗಳ ಸಮಿತಿಯು ನವೆಂಬರ್ 22 ರಂದು ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಪರಿವೀಕ್ಷಣೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಅಂದು ಬೆಳಿಗ್ಗೆ 11–00 ಗಂಟೆಗೆ ವಿಧಾನಸಭೆಯ ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿಯ ಇವರ ಕೊಠಡಿ ಸಂಖ್ಯೆ 135, ವಿಧಾನಸೌಧ ಇಲ್ಲಿ ಸಭೆ.

ಬೆಳಿಗ್ಗೆ 11–30 ಗಂಟೆಗೆ ಬೌರಿಂಗ್ ಇನ್‌ಸ್ಟಿಟ್ಯೂಟ್ ಕ್ಲಬ್ ಇವರು ಮೂಲ ಒಪ್ಪಂದಗಳನ್ನು ಉಲ್ಲಂಘಿಸಿದ್ದು, ಗುತ್ತಿಗೆಯನ್ನು ರದ್ದುಪಡಿಸುವ ಕುರಿತು ಚರ್ಚೆ ಮತ್ತು ಸ್ಥಳ ಪರಿವೀಕ್ಷಣೆ. (ಅರ್ಜಿ ಸಂಖ್ಯೆ 105/2015

ಮಧ್ಯಾಹ್ನ 1–00 ಗಂಟೆಗೆ ಬೆಂಗಳೂರು ನಗರ ಕಾಕ್ಸ್‌ಟೌನ್ ಬಡಾವಣೆಯಲ್ಲಿರುವ ಇಂಡಿಯನ್ ಜಮಖಾನ ಆಟದ ಮೈದಾನವನ್ನು ಸಾರ್ವಜನಿಕರಿಗೆ ಉಳಿಸಿಕೊಡುವ ಕುರಿತು ಚರ್ಚೆ ಮತ್ತು ಸ್ಥಳ ಪರಿವೀಕ್ಷಣೆ. (ಆರ್ಜಿ ಸಂಖ್ಯೆ 66/2014)

ಮಧ್ಯಾಹ್ನ 2-00 ಗಂಟೆಗೆ ಬಿ.ಡಿ.ಎ. ವತಿಯಿಂದ ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಬೈರತಿ ಅಮಾನಿಖಾನೆಯಲ್ಲಿ ನಿರ್ಮಿಸಿರುವ ಅರ್ಕಾವತಿ ಬಡಾವಣೆಗೆ ಸಂಪರ್ಕ ರಸ್ತೆ ಕಲ್ಪಿಸುವ ಕುರಿತು ಚರ್ಚೆ ಮತ್ತು ಸ್ಥಳ ಪರಿವೀಕ್ಷಣೆ. (ಅರ್ಜಿ ಸಂಖ್ಯೆ: 17/2018)

**ಸಂಖ್ಯೆ 1325/1425**

# ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ವ್ಯಾಸಂಗ ವೇತನ/ಫೆಲೋಶಿಪ್ ಮಂಜೂರಾತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 20, (ಕರ್ನಾಟಕ ವಾರ್ತೆ)

2018-19ನೇ ಸಾಲಿನಲ್ಲಿ ಪೂರ್ಣಾವದಿ ಪಿಎಚ್‍ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿವ ವರ್ಗಗಳ ಪ್ರವರ್ಗ-I II (ಎ) III(ಎ), III (ಬಿ) ಹಾಗೂ Other OBC ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಗೆ ಮಾಸಿಕ ರೂ 10,000/- ದಂತೆ ವ್ಯಾಸಂಗ ವೇತನ/ಫೆಲೋಶಿಪ್ ಮಂಜೂರು ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಇಲಾಖೆಯಿಂದ ಈ ಹಿಂದೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‍ಗೆ ಆಯ್ಕೆಯಾಗಿದ್ದು, ಪ್ರಸ್ತುತ ಸಾಲಿನಲ್ಲಿ ಮುಂದುವರೆಯುತ್ತಿರುವ ಅರ್ಹ ನವೀಕರಣ ವಿದ್ಯಾರ್ಥಿಗಳು ಹಾಗೂ 2018-19 ನೇ ಸಾಲಿನಲ್ಲಿ ಪ್ರಥಮ ವರ್ಷದಲ್ಲಿ ಅಭ್ಯಾಸಿಸುತ್ತಿರುವ ಹೊಸ ವಿದ್ಯಾರ್ಥಿಗಳು Online ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 30-11-2018. ಹೆಚ್ಚಿನ ವಿವರಗಳಿಗಾಗಿ ಇಲಾಖೆ ವೆಬ್‍ಸೈಟ್ www.backwardclasses.kar.nic.in ಅನ್ನು ನೋಡಬಹುದು.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8050770004 ಸಂಪರ್ಕಿಸಬಹುದಾಗಿದೆ ಅಥವಾ ಕಚೇರಿಯ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ ಸಂಜೆ 5-30 ಗಂಟೆವರೆಗೆ (ಸಾರ್ವಜನಿಕ ರಜಾ ದಿನಗಳನ್ನು ಹೊರತುಪಡಿಸಿ) ಸಂಪರ್ಕಿಸಬಹುದಾಗಿದೆ.

**ಸಂಖ್ಯೆ 1326/1426**

# ಡಿಸೆಂಬರ್ 10 ರಿಂದ ಬೆಳಗಾವಿ ಅಧಿವೇಶನ

ಬೆಂಗಳೂರು, ನವೆಂಬರ್ 20, (ಕರ್ನಾಟಕ ವಾರ್ತೆ)

15 ವಿಧಾನ ಸಭೆಯ ಎರಡನೇ ಅಧಿವೇಶನವು ಸೋಮವಾರ ದಿನಾಂಕ 10 ನೇ ಡಿಸೆಂಬರ್, 2018 ರಂದು ಮಧ್ಯಾಹ್ನ 12.15 ಕ್ಕೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಸಮಾವೇಶಗೊಳ್ಳಲಿದೆ ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿ ಅವರ ಅಧಿಕೃತ ಪ್ರಕಟಣೆ ತಿಳಿಸಿದೆ.